ಕರ್ನಾಟಕ ವಿಧಾನ ಸಭೆ

397 ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ

ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು

ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯ ಸರ್ಕಾರದಿಂದ ಬಿಪಿಎಲ್ ಹಾಗೂ ಕೇಂದ್ರ ಸರ್ಕಾರದ ಯೋಜನೆಯಾದ ಅಂತ್ಯೋದಯ ಅನ್ನ ಯೋಜನೆಯಡಿಯಲ್ಲಿ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ;

ಅಂತ್ಯೋದಯ – 45,175

ಅಕ್ಷಯ – 1,67,445

ಆ) ಈ ಪಡಿತರ ಚೀಟಿಗಳನ್ನು ಹೊಂದಲು ಇರಬೇಕಾದ ಆದಾಯ ಮಿತಿ ಎಷ್ಟು;

ಗ್ರಾಮಾಂತರ ಪ್ರದೇಶದಲ್ಲಿ 12,000/– ರೂ.ಗಳವರೆಗಿನ ವಾರ್ಷಿಕ ವರಮಾನ, ಪಟ್ಟಣ ಪ್ರದೇಶದಲ್ಲಿ 17,000/– ರೂ.ಗಳ ವರೆಗಿನ ವಾರ್ಷಿಕ ವರಮಾನವುಳ್ಳ ಕುಟುಂಬಗಳು ಬಿಪಿಎಲ್/ ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಯನ್ನು ಪಡೆಯಲು ಅರ್ಹರು.

ಇ) ರಾಜ್ಯ ಸರ್ಕಾರವು ಈ ಆದಾಯ ಮಿತಿಯನ್ನು ಹೆಚ್ಚಿಸುವ ಬಗ್ಗೆ ಸೂಕ್ತ ಆದೇಶವನ್ನು ಹೊರಡಿಸಿದೆಯೇ;

ಇಲ್ಲ.

ಈ) ಈ ಬಗ್ಗೆ ಆದೇಶ ಹೊರಡಿಸಿದ್ದಲ್ಲಿ ಆದೇಶದ ಪ್ರತಿಯನ್ನು ಒದಗಿಸುವುದು; ಅನ್ವಯಿಸುವುದಿಲ್ಲ.

ಉ) ಇಲ್ಲಿಯವರೆಗೆ ಬೀದರ್ ಜಿಲ್ಲೆಯಲ್ಲಿ ಎಷ್ಟು ಜನರಿಗೆ ಬಿಪಿಎಲ್ ಪಡಿತರ ಚೀಟಿಯನ್ನು ವಿತರಿಸಲಾಗಿದೆ;

ಇಲ್ಲಿಯವರೆಗೆ ಬೀದರ್ ಜಿಲ್ಲೆಯಲ್ಲಿ ಒಟ್ಟು 2,12,620 ಬಿಪಿಎಲ್ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.

ಊ) ಅನರ್ಹರು ಬಿಪಿಎಲ್ ಪಡಿತರ ಚೀಟಿಯನ್ನು ಹೊಂದಿದ್ದು ಅಂತಹವರನ್ನು ಪತ್ತೆ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು?

ಅನರ್ಹರು ಬಿಪಿಎಲ್ ಪಡಿತರ ಚೀಟಿಯನ್ನು ಹೊಂದಿದ್ದಲ್ಲಿ ಅಂತಹವರನ್ನು ಪತ್ತೆ ಮಾಡಲು, ಭಾವಚಿತ್ರ/ಜೀವಮಾಪಕಗಳನ್ನು ಸೆರೆ ಹಿಡಿಯುವುದು ಮತ್ತು ಸ್ಥಳ ತನಿಖೆ ಕಾರ್ಯಕೈಗೊಳ್ಳುತ್ತಿದೆ.

ಆನಾಸ 45 ಡಿಆರ್‌ಎ 2009

(ಹೆಚ್.ಹಾಲಪ್ಪ)
ಆಹಾರ ಮತ್ತು ನಾಗರಿಕ ಸರಬರಾಜು
ಮತ್ತು ಗ್ರಾಹಕ ವ್ಯವಹಾರಗಳ ಸಚಿವರು